## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸಂವಿಧಾನ ದಿನಾಚರಣೆಯ ಪ್ರಯುಕ್ತ **"ಸಂವಿಧಾನ ಜಾಗೃತಿ ಜಾಥ"** ರಾಷ್ಟ್ರೀಯ ಮಟ್ಟದ ಸಮಾವೇಶವನ್ನು ನಡೆಸಲು ಅನುದಾನ ಬಿಡುಗಡೆ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:** ಸರ್ಕಾರದ ಆದೇಶ ಸಂಖ್ಯೆ:ಸಕಇ 264 ಎಸ್ಎಲ್‌ಪಿ 2023 ದಿನಾಂಕ:21-11-2023.

******

**ಪ್ರಸ್ತಾವನೆ :**

ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ ದಿನಾಂಕ:09.11.2023 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಅನುಮೋದಿಸಿರುವಂತೆ, 2024ನೇ ಜನವರಿ ಮತ್ತು ಪೆಬ್ರುವರಿ ಮಾಹೆಯಲ್ಲಿ ಸಂವಿಧಾನ ದಿನಾಚರಣೆಯ ಪ್ರಯುಕ್ತ **"ಸಂವಿಧಾನ ಜಾಗೃತಿ ಜಾಥ"** ರಾಷ್ಟ್ರೀಯ ಮಟ್ಟದ ಸಮಾವೇಶವನ್ನು ನಡೆಸಲು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯ ಸಂಘಟನಾ ಸಮಿತಿ ಹಾಗೂ ಮಾನ್ಯ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯ ಕಾರ್ಯನಿರ್ವಹಣಾ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

ಮುಂದುವರೆದು, ಸಮಾವೇಶಕ್ಕೆ ವೆಚ್ಚವಾಗಲಿರುವ ಅಂದಾಜು ವೆಚ್ಚ ರೂ.18.00 ಕೋಟಿಗಳನ್ನು ಭರಿಸಲು ಅನುಮೋದನೆ ನೀಡಿದ್ದು ಈ ಅನುದಾನದಲ್ಲಿ ಪ್ರತಿ ಜಿಲ್ಲಾ ಕೇಂದ್ರದಲ್ಲಿ ಸಂವಿಧಾನ ಪೀಠಿಕೆಯ ಆಶಯ ಮತ್ತು ಮೌಲ್ಯಗಳನ್ನ ಎಲ್ಲಾ ಜನರಿಗೆ ತಿಳಿಸಲು ಸಂವಿಧಾನ ಜಾಗೃತ ಜಾಥ ಕಾರ್ಯಕ್ರಮದ (Tableau) ಸ್ತಬ್ಧಚಿತ್ರಕ್ಕೆ ಮತ್ತು ಇತರೆ ವೆಚ್ಚಕ್ಕಾಗಿ ಈ ಅನುದಾನದಲ್ಲಿ ಪ್ರತಿ ಜಿಲ್ಲೆಗೆ ರೂ.25.00 ಲಕ್ಷ (ಇಪ್ಪತ್ತೈದು ಲಕ್ಷ ರೂಗಳು)ಗಳಂತೆ ರೂ.775 ಲಕ್ಷಗಳ ಅನುದಾನವನ್ನು ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗುವುದು. ಉಳಿದ ಅನುದಾನವನ್ನು ಈ ಕಾರ್ಯಕ್ರಮದ ಹಂತ- 2 ಮತ್ತು 3ಕ್ಕೆ ಬಳಸಿಕೊಳ್ಳಲಾಗುವುದು.

ಈ ಕಾರ್ಯಕ್ರಮಕ್ಕೆ ಅಂದಾಜಿಸಲಾಗಿರುವ ವೆಚ್ಚ ರೂ.18.00 ಕೋಟಿಗಳನ್ನು ಸಮಾಜ ಕಲ್ಯಾಣ ಇಲಾಖೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಗಳ ಅಧೀನದಲ್ಲಿನ ಈ ಕೆಳಗಿನ ಇಲಾಖೆ/ನಿಗಮಗಳ ವತಿಯಿಂದ ಭರಿಸಲು ನಿರ್ಣಯಿಸಲಾಗಿದೆ.

| Sl No. | Department/Corporations | Amount in Lakhs (INR) |
|---|---|---|
| 1 | Commissioner, Social Welfare Department. | 400.00 |
| 2 | Karnataka Residential Educational Institutions Society. | 350.00 |
| 3 | Director, Scheduled Tribes Welfare Department. | 200.00 |
| 4 | Dr.B.R.Ambedkar Development Corporation. | 200.00 |
| 5 | Karnataka Thanda Development Corporation Limited. | 150.00 |
| 6 | Karnataka Bhovi Development Corporation | 125.00 |
| 7 | Karnataka State Safai Karmachari Development Corporation | 100.00 |
| 8 | Karnataka Adi Jambava Development Corporation | 125.00 |
| 9 | Dr Babu Jagjivan Ram Leather Industries Development Corporation | 150.00 |
| | **TOTAL INR (In Lakh)** | **1800.00** |

ರಾಷ್ಟ್ರೀಯ ಮಟ್ಟದ ಸಮ್ಮೇಳನವನ್ನು ನಡೆಸಲು ಅಂದಾಜಿಸಲಾಗಿರುವ ವೆಚ್ಚ ರೂ.18.00 ಕೋಟಿಗಳನ್ನು ಭರಿಸಲು ಸಚಿವ ಸಂಪುಟದ ಅನುಮೋದನೆಯಂತೆ ಮೇಲೆ ತಿಳಿಸಿದ ಇಲಾಖೆ/ನಿಗಮ/ಮಂಡಳಿಗಳಿಂದ ಭರಿಸಲು ಮತ್ತು ಕಾರ್ಯಕ್ರಮಕ್ಕೆ ವೆಚ್ಚ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಿ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 264 ಎಸ್‌ಎಲ್‌ಪಿ 2023, ಬೆಂಗಳೂರು, ದಿನಾಂಕ : 14.01.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2024ನೇ ಜನವರಿ ಮತ್ತು ಫೆಬ್ರುವರಿ ಮಾಹೆಯಲ್ಲಿ ಸಂವಿಧಾನ ದಿನಾಚರಣೆಯ ಪ್ರಯುಕ್ತ ರಾಷ್ಟ್ರೀಯ ಮಟ್ಟದ ಸಮಾವೇಶವನ್ನು **"ಸಂವಿಧಾನ ಜಾಗೃತಿ ಜಾಥ"** ಎಂಬ ಶೀರ್ಷಿಕೆಯಡಿ ಜಿಲ್ಲಾ ಕೇಂದ್ರಗಳ ಸ್ತಬ್ಧಚಿತ್ರ (Tableau) ಮೆರವಣಿಗೆ ಹಾಗೂ ಅರಮನೆ ಮೈದಾನ ಬೆಂಗಳೂರು ಇಲ್ಲಿ ನಡೆಯುವ ಸಮಾವೇಶಕ್ಕೆ ಅಂದಾಜು ವೆಚ್ಚ ರೂ.18.00 ಕೋಟಿ

(ರೂ ಹದಿನೆಂಟು ಕೋಟಿಗಳು ಮಾತ್ರ) ಗಳ ಅನುದಾನವನ್ನು ಈ ಕೆಳಕಂಡ ಕೋಷ್ಟಕದಲ್ಲಿ ತಿಳಿಸಿರುವ ಇಲಾಖೆ/ನಿಗಮ/ಮಂಡಳಿಗಳು ನಿಗಧಿಪಡಿಸಿರುವ ಅನುದಾನವನ್ನು ಬಿಡುಗಡೆ ಮಾಡಲು ಮತ್ತು ಸಮಾವೇಶಕ್ಕೆ ವೆಚ್ಚ ಭರಿಸಲು ಕೆಳಕಂಡ ಷರತ್ತಿಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ವೆಚ್ಚದ ಹಂಚಿಕೆಯ ವಿವರ:-

| ಕ್ರ.ಸಂ | ಇಲಾಖೆ/ನಿಗಮ | ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ | 400.00 |
| 2 | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ | 350.00 |
| 3 | ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ | 200.00 |
| 4 | ಡಾ. ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮ | 200.00 |
| 5 | ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ | 150.00 |
| 6 | ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ | 125.00 |
| 7 | ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ | 100.00 |
| 8 | ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮ | 125.00 |
| 9 | ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ | 150.00 |
| | **ಒಟ್ಟು** | **1800.00** |

**ಷರತ್ತುಗಳು:**

1. ಕಾರ್ಯಕ್ರಮಕ್ಕೆ ನಿಗದಿಪಡಿಸಲಾಗಿರುವ ವೆಚ್ಚವನ್ನು ಸಂಬಂಧಿಸಿದ ಇಲಾಖೆ/ನಿಗಮ/ಮಂಡಳಿಗಳು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರಿಗೆ ಲೆಕ್ಕಶೀರ್ಷಿಕೆ:2225-01-796-0-02 (ಇತರೆ ಕಾರ್ಯಕ್ರಮಗಳು)ಕ್ಕೆ ಬಿಡುಗಡೆ ಮಾಡುವುದು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ಕಾರ್ಯಕ್ರಮದ ರೂಪುರೇಷೆಯಂತೆ ಅಂದಾಜಿಸಲಾಗಿರುವ ವೆಚ್ಚದ ಕುರಿತು ಮೇಲುಸ್ತುವಾರಿ ವಹಿಸುವುದು.

3. ಈ ಅನುದಾನವನ್ನು ಸದರಿ ಕಾರ್ಯಕ್ರಮಕ್ಕೆ ಹೊರತುಪಡಿಸಿ ಬೇರೆ ಕಾರ್ಯಕ್ರಮಕ್ಕೆ ಬಳಸತಕ್ಕದ್ದಲ್ಲ.
4. ಈ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಹೊರಡಿಸಲಾಗಿರುವ ಸರ್ಕಾರಿ ಆದೇಶದಲ್ಲಿನ ಮಾರ್ಗಸೂಚಿಯಂತೆ ಪ್ರತಿ ಜಿಲ್ಲಾ ಕೇಂದ್ರದಲ್ಲಿ ಸಂವಿಧಾನ ಪೀಠಿಕೆಯ ಆಶಯ ಮತ್ತು ಮೌಲ್ಯಗಳನ್ನ ಎಲ್ಲಾ ಜನರಿಗೆ ತಿಳಿಸಲು ಸಂವಿಧಾನ ಜಾಗೃತ ಜಾಥ ಕಾರ್ಯಕ್ರಮದ (LED Mounted Tableau) ಸ್ತಬ್ಧಚಿತ್ರಕ್ಕೆ ಮತ್ತು ಇತರೆ ವೆಚ್ಚಕ್ಕಾಗಿ ಈ ಅನುದಾನದಲ್ಲಿ ಪ್ರತಿ ಜಿಲ್ಲೆಗೆ ರೂ.25.00 ಲಕ್ಷ (ಇಪ್ಪತ್ತೈದು ಲಕ್ಷ ರೂಗಳು)ಗಳ ಅನುದಾನವನ್ನು ಜಿಲ್ಲಾಧಿಕಾರಿಗಳು ಮತ್ತು ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಇವರ ಜಂಟಿ ಖಾತೆಗೆ ಆಯುಕ್ತರು ಸಮಾಜ ಕಲ್ಯಾಣ ಇಲಾಖೆ, ಇವರು ತಕ್ಷಣ ಬಿಡುಗಡೆ ಮಾಡುವುದು.
5. ಜಿಲ್ಲೆಗಳಿಗೆ ಬಿಡುಗಡೆ ಮಾಡಿ ಉಳಿಯುವ ಬಾಕಿ ಅನುದಾನವನ್ನು ಹಂತ-2 ಮತ್ತು ಹಂತದ -3ರ ಕಾರ್ಯಕ್ರಮಕ್ಕೆ ಬಿಡುಗಡೆ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

14/1/24
(ಎಲ್ ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:-**

1) ಮಹಾಲೇಖಪಾಲರು, (ಎ & ಇ ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ), ವಿಧಾನಸೌಧ, ಬೆಂಗಳೂರು.
4) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
5) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6) ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
7) ಎಲ್ಲಾ ನಿಗಮ/ಸಂಸ್ಥೆ/ಮಂಡಳಿಗಳ ವ್ಯವಸ್ಥಾಪಕ ನಿರ್ದೇಶಕರು, ನಿರ್ದೇಶಕರು.
8) ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು .
9) ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು
10) ಎಲ್ಲಾ ಜಿಲ್ಲಾ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
11) ಕಲ್ಯಾಣ ಕೇಂದ್ರ, 24/7 helpdesk, ಸಮಾಜ ಕಲ್ಯಾಣ ಇಲಾಖೆ, ಯವನಿಕ ಆವರಣ, ನೃಪತುಂಗ ರಸ್ತೆ, ಡಾ|| ಬಿ.ಆರ್ ಅಂಬೇಡ್ಕರ್ ವೀಧಿ, ಬೆಂಗಳೂರು.

12) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿಗಳು:**

1. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಜಲಸಂಪನ್ಮೂಲ ಮತ್ತು ಬೆಂಗಳೂರು ಅಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಮಾನ್ಯ ಗೃಹ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಪ್ರವಾಸೋದ್ಯಮ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಮಾನ್ಯ ಲೋಕೋಪಯೋಗಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
10. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಐ.ಟಿ & ಬಿ.ಟಿ ಸಚಿವರ, ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
11. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ, ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
12. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
13. ಮಾನ್ಯ ಯುವಜನ ಸೇವಾ, ಕ್ರೀಡಾ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
14. ಮಾನ್ಯ ಸಹಕಾರ ಮತ್ತು ಕೃಷಿ ಉತ್ಪನ್ನ ಮಾರುಕಟ್ಟೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
15. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
16. ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
17. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ.

**************